## ಪ್ರಧಾನ  ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು

## ಸಿ.ಸಿಃ 1130/2018

| | | | |
|---|---|---|---|
| ಸಾಕ್ಷಿದಾರರ ಹೆಸರು | | ಚನ್ನರಾಜು | ಪ್ರಾ.ಸಾಃ 3 |
| ತಂದೆಯ/ಗಂಡನ ಹೆಸರು | | ಲೇಟ್ ಚನ್ನಪ್ಪ | ಚಾಸಾಃ 3 |
| ವಯಸ್ಸು | | 45 | |
| ಕೆಲಸ | | ವ್ಯವಸಾಯ | ಸಾ ಪ್ರ ಬೋ |
| ವಾಸ | | ಅಂಚೀಪುರ ಗ್ರಾಮ | ದಿಃ 01.08.2023 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

ಮಹಜರ್ ನಲ್ಲಿರುವ ಸಹಿಯನ್ನು ಸಾಕ್ಷಿ ಈಗ ನೋಡಿ ಗುರುತಿಸಿದ್ದು, ಇದನ್ನು ನಿಪಿ 2 ಎಂದು ಸಹಿಯನ್ನು ನಿಪಿ 2(ಎ) ಎಂದು ಗುರುತಿಸಲಾಯಿತು. ಈಗ್ಗೆ ಸುಮಾರು 10 ವರ್ಷಗಳ ಹಿಂದೆ ನಾನು ಪೊಲೀಸರ ಕೋರಿಕೆಯ ಮೇರೆಗೆ ಠಾಣೆಯಲ್ಲಿ ನಿಪಿ 2 ಕ್ಕೆ ಸಹಿ ಮಾಡಿರುತ್ತೇನೆ. ನಿಪಿ 2 ರಲ್ಲಿರುವ ವಿಚಾರ ನನಗೆ ಗೊತ್ತಿರುವುದಿಲ್ಲ. ಪೊಲೀಸರು ನನಗೆ ಓದಿ ಹೇಳಿರುವುದಿಲ್ಲ. ನನ್ನ ಸಮಕ್ಷಮದಲ್ಲಿ ಯಾವುದೇ ವಾಹನಗಳನ್ನು ಅಮಾನತ್ತುಪಡಿಸಿ ಕೊಂಡಿರುವುದಿಲ್ಲ.

( ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾನೆ. ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು )

**ಪಾಟೀ ಸವಾಲುಃ ಶ್ರೀ ಎಪಿಪಿ ಯವರಿಂದಃ**

ದಿನಾಂಕ 29.03.2018 ರಂದು ಚಾಸಾ 2 ರವರು ಸ್ಥಳ ತೋರಿಸಿದ ಮೇರೆಗೆ ನನ್ನ ಮತ್ತು ಚಾಸಾ 4 ರವರ ಸಮಕ್ಷಮದಲ್ಲಿ ಮಧ್ಯಾಹ್ನ 11.30 ರಿಂದ 12.30 ರವರೆಗೆ ವಿವರವಾದ ಮಹಜರನ್ನು ಜರುಗಿಸಿ ನ್ಯಾಯಾಲಯ ಮುಂದಿರುವ ಮುದ್ದೆ ಮಾಲು 1 ಮತ್ತು 2 ನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ

ಸರಿಯಲ್ಲ. ನಿಪಿ 2 ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಎಲ್ಲಾ ಗೊತ್ತಿದ್ದರೂ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಶ್ರೀ ವಕೀಲರಿಂದ ಆರೋಪಿ ಪರವಾಗಿಃ ಏನು ಇಲ್ಲಾ**

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಒ**

ಸಹಿ/-

**ಪ್ರಧಾನ ಸಿ.ಜೆ ಮತ್ತು ಪ್ರದನ್ಯಾದಂ,**

**ನಂಜನಗೂಡು**